### ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಾವಣಗೆರೆ ಜಿಲ್ಲೆ, ದಾವಣಗೆರೆ ತಾಲ್ಲೂಕಿನ ಹೆಬ್ಬಾಲು ಮತ್ತು ಇತರೆ 13 ಗ್ರಾಮಗಳ ಹಾಗೂ ಕೊಡಗನೂರು ಮತ್ತು ಇತರೆ 18 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಸಂಯುಕ್ತ ಜಲಸಂಗ್ರಹಾಗಾರಕ್ಕೆ ಅಗತ್ಯವಿರುವ ಕಾಮಗಾರಿಯನ್ನು ರೂ.300.00ಲಕ್ಷ ಅಂದಾಜು ವೆಚ್ಚದಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂ:ಗ್ರಾಅಪ 220 ಗ್ರಾನೀಸ(5)2012 ದಿನಾಂಕ:11.02.2013 ಮತ್ತು ಸಂ:ಗ್ರಾಅಪ 140 ಗ್ರಾನೀಸ(5)13 ದಿನಾಂಕ:23.10.2013.
2. ಮುಖ್ಯ ಇಂಜಿನಿಯರ್, RDWSD ರವರ ಕಡತ ಸಂ:ಗ್ರಾಅಪ 253 ಗ್ರಾಕುನೀ&ನೈಇ 2017-18

-----

**ಪೀಠಿಕೆ:**

ದಾವಣಗೆರೆ ಜಿಲ್ಲೆ, ದಾವಣಗೆರೆ ತಾಲ್ಲೂಕಿನ ಹೆಬ್ಬಾಲು ಮತ್ತು ಇತರೆ 13 ಗ್ರಾಮಗಳ ಹಾಗೂ ಕೊಡಗನೂರು ಮತ್ತು ಇತರೆ 18 ಗ್ರಾಮಗಳ ಕುಡಿಯುವ ನೀರಿನ ಯೋಜನೆಗಳಿಗೆ ಮೇಲೆ(1)ರಲ್ಲಿ ಓದಲಾದ ಆದೇಶಗಳಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಈ ಎರಡು ಯೋಜನೆಗಳಿಗೆ ಸಂಯುಕ್ತ ಜಲಸಂಗ್ರಹಾಗಾರ ನಿರ್ಮಿಸಲು ಅವಕಾಶ ಕಲ್ಪಿಸಲಾಗಿದ್ದು, ಮೂಲ ಅಂದಾಜಿನಲ್ಲಿ ಪರಿಗಣಿಸಲಾಗಿಲ್ಲದ ಹಾಗೂ ಅತಿ ಅವಶ್ಯಕವಿರುವ ಐಟಂಗಳನ್ನು ಪರಿಗಣಿಸಿ ಕೈಗೊಳ್ಳಲು ರೂ.300.00ಲಕ್ಷ ಅಂದಾಜಿನ ಕಾಮಗಾರಿಗೆ ಅನುಮೋದನೆ ನೀಡುವಂತೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಕೋರಿರುತ್ತಾರೆ. ಈ ಕಾಮಗಾರಿಯನ್ನು 2017-18ರ ಸಾಲಿನ ಕ್ರಿಯಾ ಯೋಜನೆಯಲ್ಲಿ NRDWP – Sustainability ಘಟಕದಡಿ ಸೇರಿಸಲಾಗಿದೆ. ರೂ.300.00ಲಕ್ಷ ಅಂದಾಜು ಮೊತ್ತದ ಸದರಿ ಕಾಮಗಾರಿಗೆ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂ: ಗ್ರಾಅಪ 36 ಗ್ರಾನೀಸ (5) 2018 ಬೆಂಗಳೂರು ದಿನಾಂಕ: 10.08.2018**

28/8/18

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ದಾವಣಗೆರೆ ಜಿಲ್ಲೆ, ದಾವಣಗೆರೆ ತಾಲ್ಲೂಕಿನ ಹೆಬ್ಬಾಲು ಮತ್ತು ಇತರೆ 13 ಗ್ರಾಮಗಳ ಹಾಗೂ ಕೊಡಗನೂರು ಮತ್ತು ಇತರೆ 18 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಪೂರೈಕೆ ಯೋಜನೆಗಳ ಸಂಯುಕ್ತ ಜಲಸಂಗ್ರಹಾಗಾರಕ್ಕೆ ಅಗತ್ಯವಿರುವ ಕೆಲವು ಅಂಶಗಳನ್ನು (Item) ಅಳವಡಿಸುವ ಕಾಮಗಾರಿಯ ಅಂದಾಜು ಮೊತ್ತ **ರೂ.300.00ಲಕ್ಷ (ಮೂರು ನೂರು ಲಕ್ಷ ರೂಪಾಯಿಗಳು ಮಾತ್ರ)** ಗಳಿಗೆ ಕೇಂದ್ರ ಪುರಸ್ಕೃತ NRDWP– Sustainability ಘಟಕದಡಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಅನುಮೋದಿತ ಕಾಮಗಾರಿಯ ಅಂದಾಜು ವೆಚ್ಚದಲ್ಲಿ ಯಾವುದೇ ಹೆಚ್ಚಳಕ್ಕೆ ಅವಕಾಶವೀಯದಂತೆ ನಿಗದಿತ ಅವಧಿಯೊಳಗೆ ಕಾಮಗಾರಿ ಅನುಷ್ಠಾನಗೊಳಿಸತಕ್ಕದ್ದು.

3. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 154 ಎಎಫ್‌ಎನ್ 2018, ದಿನಾಂಕ:31.07.2018ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ಕರಿಯಪ್ಪ)
ಸರ್ಕಾರದ ಉಪಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಬಳ್ಳಾರಿ.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ.
7. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂಗಳೂರು–09.
8. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಕಲಬುರಗಿ.
9. ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬಳ್ಳಾರಿ.
10. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
11. ಮುಖ್ಯ ಲೆಕ್ಕಾಧಿಕಾರಿ, RDWSD, ಕಾವೇರಿಭವನ, ಬೆಂಗಳೂರು–09.
12. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
13. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
14. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
15. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
16. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
17. ಆಯುಕ್ತರು, RDWSD ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು ಇವರುಗಳ ಆಪ್ತ ಸಹಾಯಕರು.
18. ಉಪ ನಿರ್ದೇಶಕರು, Network Management Centre (TNMC), ನಂ.49, ಖನಿಜ ಭವನ, ರೇಸ್ ಕೋರ್ಸ ರಸ್ತೆ, ಬೆಂಗಳೂರು.
19. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಬ್ರ್ಯಾಂಚ್, ರಾಜದ್ದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
20. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
21. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
22. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
23. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
24. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.